ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್.522/2023

ಸಾಕ್ಷಿಯ ಹೆಸರು : ಮೂರ್ತಿ ಸಿ.ಡಬ್ಲ್ಯು 9

ತಂದೆಯ ಹೆಸರು : ಬಸವರಾಜ್ ಪಿ.ಡಬ್ಲ್ಯು 7

ವಯಸ್ಸು : 30 ವರ್ಷ

ಉದ್ಯೋಗ : ವ್ಯವಸಾಯ

ವಾಸ ಸ್ಥಳ : ತರೀಕೆರೆ

ದಿನಾಂಕಃ23.09.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು:

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನನಗೆ ಈ ಪ್ರಕರಣದಲ್ಲಿ ಆಗಿದೆ ಎನ್ನಲಾಗುವ ಯಾವುದೇ ಅಪಘಾತದ ಬಗ್ಗೆ ನನಗೆ ಮಾಹಿತಿ ಇಲ್ಲ. ನಾನು ಯಾವುದೇ ಅಪಘಾತವನ್ನು ನೋಡಿಲ್ಲ. ಪೋಲೀಸರು ನನ್ನ ಹೇಳಿಕೆಯನ್ನು ಪಡೆದುಕೊಂಡಿಲ್ಲ

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿನಾಂಕ 03.10.2022 ರಂದು ರಾತ್ರಿ 10.45 ರ ಸುಮಾರಿಗೆ 1 ನೇ ಸಾಕ್ಷಿದಾರರ ಮಗ 10 ನೇ ಸಾಕ್ಷಿದಾರರೊಂದಿಗೆ ಅವರಿಗೆ ಸೇರಿದ ಹೀರೋ ಹೋಂಡಾ ವಾಹನ ಸಂಖ್ಯೆ.ಕೆ.ಎ.66 ಕೆ.4082 ನ್ನು ಚಲಾಯಿಸಿಕೊಂಡು ಹೋಗುತ್ತಿದ್ದಾಗ ಎದುರಿನಿಂದ ಭದ್ರಾವತಿ ಕಡೆಯಿಂದ ಅತೀ ವೇಗವಾಗಿ ಬಂದ ಆರೋಪಿಯ ಲಾರಿ ನಂಬರ್.ಕೆ.ಎ.13 ಡಿ.3565 ವಾಹನವು ಚಾಸ-1 ರವರ ಮಗನ ವಾಹನಕ್ಕೆ ಡಿಕ್ಕಿ ಪಡಿಸಿ ಅಪಘಾತ ಪಡಿಸಿದ ಕಾರಣ ಚಾಸ-1 ರವರ ಮಗ ತೇಜಸ್ ಈತನ ತಲೆಗೆ ತೀವ್ರ ಸ್ವರೂಪದ ಗಾಯಗಳನು ಉಂಟಾದವು ಎಂದರೆ ನನಗೆ ಗೊತ್ತಿಲ್ಲ. ಚಿಕಿತ್ಸೆ ಫಲಕಾರಿಯಾಗದೆ ಆತನು ಅದೇ ದಿವಸ ಮರಣ ಹೊಂದಿದ್ದಾನೆ ಎಂದರೆ ಸರಿಯಲ್ಲ. ಆರೋಪಿಯು ತನ್ನ ಲಾರಿಯನ್ನು ಅತೀ ವೇಗ ಮತ್ತು ನಿರ್ಲಕ್ಷ ತನದಿಂದ ಚಾಲನೆ ಮಾಡಿ ಡಿಕ್ಕಿ ಪಡಿಸಿದ ಕಾರಣ ಅಪಘಾತ ಆಗಿದೆ ಎಂದರೆ ನನಗೆ ಗೊತ್ತಿಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ವಕೀಲರು ಪಾಟೀಸವಾಲು ಇರುವುದಿಲ್ಲ ಎಂದು ಹೇಳುತ್ತಾರೆ.

<u>ಮರುವಿಚಾರಣೆ :</u> ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.